# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2275 |
| ಮಾನ್ಯ ಸದಸ್ಯರ ಹೆಸರು | : | ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 21-03-2022 |
| ಉತ್ತರಿಸುವ ಸಚಿವರು | : | ಪ್ರವಾಸೋದ್ಯಮ, ಜೀವಿಶಾಸ್ತ್ರ, ಹಾಗೂ ಪರಿಸರ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ಕಾಶ್ಮೀರವೆಂದೇ ಖ್ಯಾತಿ ಪಡೆದ ಕೊಡಗು ಜಿಲ್ಲೆಯಲ್ಲಿ ಪರಿಸರ ಸ್ನೇಹಿ ಹಾಗೂ ಸುಸ್ಥಿರ ಪ್ರವಾಸೋದ್ಯಮದ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಹಾಗೂ ರೂಪಿಸಿರುವ ಪ್ರವಾಸಿಸ್ನೇಹಿ ಯೋಜನೆಗಳೇನು; | ಕರ್ನಾಟಕ ಪ್ರವಾಸೋದ್ಯಮ ನೀತಿ 2020-26ರ ಅಡಿಯಲ್ಲಿ ರಾಜ್ಯದಲ್ಲಿ ಗುರುತಿಸಲಾದ ಪ್ರವಾಸಿ ತಾಣಗಳಲ್ಲಿ ಪ್ರವಾಸೋದ್ಯಮ ಯೋಜನೆಗಳಲ್ಲಿ ಪರಿಸರ ಸ್ನೇಹಿ ಹಾಗೂ ಸುಸ್ಥಿರ ಪ್ರವಾಸೋದ್ಯಮ ಉಪಕ್ರಮಗಳನ್ನು ಅಳವಡಿಸಿಕೊಂಡಿರುವ ಹಾಗೂ ಇಲಾಖೆಯಲ್ಲಿ ನೋಂದಾಯಿತವಾಗಿರುವ ಸಂಸ್ಥೆಗಳಿಗೆ ಈ ಕೆಳಕಂಡಂತೆ ಆರ್ಥಿಕ ನೆರವನ್ನು ನೀಡಲು ಪ್ರಸ್ತಾಪಿಸಲಾಗಿದೆ. (see table below) |

| ಕ್ರಮ ಸಂಖ್ಯೆ | ಕ್ರಮ | ಆರ್ಥಿಕ ನೆರವು | ಪ್ರತಿ ಪ್ರವಾಸೋದ್ಯಮ ಯೋಜನೆಯ ಸಹಾಯಧನಕ್ಕೆ ಸಂಬಂಧಿಸಿದ ಗರಿಷ್ಠ ಮೊತ್ತ |
|---|---|---|---|
| 1 | ಜಲ ಸಂರಕ್ಷಣೆ ಮತ್ತು ಮಳೆ ನೀರು ಸಂಗ್ರಹ | ಕ್ರಮ ಕೈಗೊಳ್ಳುವುದಕ್ಕಾಗಿ ಶೇ.50 ರಷ್ಟು | ರೂ.1.00 ಲಕ್ಷ |
| 2 | ನವೀಕರಿಸಬಹುದಾದ ಇಂಧನ ಮೂಲಗಳ ಅಳವಡಿಕೆ | ಕ್ರಮ ಕೈಗೊಳ್ಳುವುದಕ್ಕಾಗಿ ಶೇ.50 ರಷ್ಟು | ರೂ.1.00 ಲಕ್ಷ |
| 3 | ಮಾಲಿನ್ಯ ನಿಯಂತ್ರಣ ಕ್ರಮಗಳ ಅಳವಡಿಕೆ | ಕ್ರಮ ಕೈಗೊಳ್ಳುವುದಕ್ಕಾಗಿ ಶೇ.50 ರಷ್ಟು | ರೂ.1.00 ಲಕ್ಷ |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಆ) | ಕೊಡಗು ಜಿಲ್ಲೆಯಲ್ಲಿ "ಹೆಲಿ ಟ್ಯೂರಿಸಂ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆಯೇ; ಅನುಷ್ಠಾನಗೊಳಿಸುತ್ತಿದ್ದಲ್ಲಿ, ಜಿಲ್ಲೆಯ ಎಷ್ಟು ಪ್ರವಾಸಿ ತಾಣಗಳನ್ನು "ಹೆಲಿ ಟ್ಯೂರಿಸಂ" ಯೋಜನೆಯಡಿ ಪರಿಗಣಿಸಲಾಗಿದೆ; | ಹೌದು,<br><br>ಕರ್ನಾಟಕ ರಾಜ್ಯದಲ್ಲಿ ಹೆಲಿ-ಟೂರಿಸಂ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ (ಕೆ.ಎಸ್.ಟಿ.ಡಿ.ಸಿ.)ವನ್ನು ನೋಡಲ್ ಏಜೆನ್ಸಿಯಾಗಿ ನಿಯೋಜಿಸಲಾಗಿದ್ದು, ಕೆ.ಎಸ್.ಟಿ.ಡಿ.ಸಿ. ಮೂಲಕ ಹೆಲಿಕಾಪ್ಟರ್ ಸೇವಾ ಪೂರೈಕೆದಾರರಾದ ತುಂಬಿ ಏವಿಯೇಷನ್ ಪ್ರೈವೇಟ್ ಲಿಮಿಟೆಡ್ ಮತ್ತು ಚಿಪ್ಸನ್ ಏವಿಯೇಷನ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯವರೊಂದಿಗೆ ಜನವರಿ-2022 ರಲ್ಲಿ ಒಪ್ಪಂದ ಮಾಡಿಕೊಳ್ಳಲಾಗಿರುತ್ತದೆ.<br><br>ಸದರಿ ಯೋಜನೆಯಲ್ಲಿ ಕೊಡಗು ಜಿಲ್ಲೆಯ ಪ್ರಮುಖ ಪ್ರವಾಸಿ ಸ್ಥಳಗಳನ್ನು ಒಳಗೊಂಡಂತೆ ಸರ್ಕ್ಯೂಟ್ ರಚಿಸಲು ಹೆಲಿ-ಟೂರಿಸಂ ಸೇವಾ ಪೂರೈಕೆದಾರರಿಗೆ ತಿಳಿಸಲಾಗಿರುತ್ತದೆ. |
| ಇ) | ಜಿಲ್ಲೆಯಲ್ಲಿ, ಸದರಿ ಯೋಜನೆಯಡಿ ಪರಿಗಣಿಸಿರುವ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಇದುವರೆಗೆ ಸರ್ಕಾರ ನೀಡಿರುವ ಅನುದಾನ ಎಷ್ಟು; ಹಾಗೂ ಕೈಗೊಂಡಿರುವ ಕಾಮಗಾರಿಗಳೆಷ್ಟು? (ವಿವರ ನೀಡುವುದು) | ಸದರಿ ಯೋಜನೆಗೆ ಇಲಾಖೆಯಿಂದ ಇದುವರೆಗೂ ಯಾವುದೇ ಅನುದಾನ ನೀಡಿರುವುದಿಲ್ಲ. |

TOR 144 TDV 2022

(ಆನಂದ್ ಸಿಂಗ್)
ಪ್ರವಾಸೋದ್ಯಮ, ಜೀವಿಶಾಸ್ತ್ರ,
ಹಾಗೂ ಪರಿಸರ ಸಚಿವರು